## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ॥ ಜಿಂದಾಲ್ ಅಲ್ಯೂಮಿನಿಯಮ್ ಲಿಮಿಟೆಡ್ ಕಂಪನಿಗೆ ದಾವಣಗೆರೆ ಜಿಲ್ಲೆ ಮತ್ತು ತಾಲ್ಲೂಕಿನ ಬಾವಿಹಾಳು ಗ್ರಾಮದಲ್ಲಿ 10 ಮೆ.ವ್ಯಾ.ಗಳ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ನೀಡುವ ಬಗ್ಗೆ.

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 326 SG.
2. ಸರ್ಕಾರದ ಆದೇಶ ಸಂಖ್ಯೆ : ಇಎನ್ 260 ಎನ್‌ಸಿಇ 2016, ದಿನಾಂಕ : 13.10.2016.
3. ಮೆ॥ ಜಿಂದಾಲ್ ಅಲ್ಯೂಮಿನಿಯಮ್ ಲಿಮಿಟೆಡ್ ಕಂಪನಿರವರ ದಿನಾಂಕ: 13.10.2016 ರ ಮನವಿ.

* * *

**ಪ್ರಸ್ತಾವನೆ :-**

ಮೆ॥ ಜಿಂದಾಲ್ ಅಲ್ಯೂಮಿನಿಯಮ್ ಲಿಮಿಟೆಡ್ ಕಂಪನಿಗೆ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಕಲರಮರಹಳ್ಳಿ ಗ್ರಾಮದಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ವಂತ ಉಪಯೋಗಕ್ಕೆ ಸ್ಥಾಪಿಸಲು ಅನುಮತಿ ಕೋರಿ ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಏಕ ಕಡತದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್‌ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದ ಮೂಲಕ ನಿರಾಕ್ಷೇಪಣೆಯನ್ನು ನೀಡಿರುತ್ತದೆ.

ಸದರಿ ಯೋಜನೆಯ ಸ್ಥಳವನ್ನು ಕಾರಣಾಂತರಗಳಿಂದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಕಲರಮರಹಳ್ಳಿ ಗ್ರಾಮದ ಬದಲಾಗಿ ದಾವಣಗೆರೆ ಜಿಲ್ಲೆ ಮತ್ತು ತಾಲ್ಲೂಕಿನ ಬಾವಿಹಾಳು ಗ್ರಾಮದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಅದರಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ನಮೂದಿಸಿದ್ದ ಯೋಜನಾ ಅನುಷ್ಠಾನದ ಪ್ರದೇಶವನ್ನು ತಿದ್ದುಪಡಿ ಮಾಡಿ ಆದೇಶವನ್ನು ಹೊರಡಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಮನವಿಯಲ್ಲಿ ಮೆ॥ ಜಿಂದಾಲ್ ಅಲ್ಯೂಮಿನಿಯಮ್ ಲಿಮಿಟೆಡ್ ಕಂಪನಿರವರು ಕೋರಿಕೆ ಸಲ್ಲಿಸಿರುತ್ತಾರೆ. ಸದರಿ ಕೋರಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಸದರಿ ಯೋಜನೆಯು ಐ.ಪಿ.ಪಿ ವರ್ಗದಡಿ ಸ್ವಂತ ಉಪಯೋಗಕ್ಕೆ ಹಂಚಿಕೆಯಾಗಿರುವುದನ್ನು ಪರಿಗಣಿಸಿ ಸದರಿ ಯೋಜನೆಯನ್ನು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಕಲರಮರಹಳ್ಳಿ ಗ್ರಾಮದ ಬದಲಾಗಿ ದಾವಣಗೆರೆ ಜಿಲ್ಲೆಯ ದಾವಣಗೆರೆ ತಾಲ್ಲೂಕಿನ ಬಾವಿಹಾಳು ಗ್ರಾಮಕ್ಕೆ ಸ್ಥಳಾಂತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 260 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 21.10.2016.**

ಮೆ॥ ಜಿಂದಾಲ್ ಅಲ್ಯೂಮಿನಿಯಮ್ ಲಿಮಿಟೆಡ್ ಕಂಪನಿಗೆ ಸಮ ಸಂಖ್ಯೆಯ ದಿನಾಂಕ: 13.10.2016 ರ ಆದೇಶದ ಮೂಲಕ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಕಲರಮರಹಳ್ಳಿ ಗ್ರಾಮದಲ್ಲಿ ಹಂಚಿಕೆಯಾಗಿದ್ದ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕದ ಯೋಜನಾ ಪ್ರದೇಶವನ್ನು **ಮಾರ್ಪಡಿಸಿ** ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲ್ಲೂಕಿನ ಬಾವಿಹಾಳು ಗ್ರಾಮದಲ್ಲಿ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸಮ್ಮತಿಸಲಾಗಿದೆ.

...2

ಯೋಜನಾ ಪ್ರದೇಶದ ಬದಲಾವಣೆಯನ್ನು ಹೊರತುಪಡಿಸಿ ಉಳಿದಂತೆ ದಿನಾಂಕ: 13.10.2016 ರ ಸಮ ಸಂಖ್ಯೆಯ ಆದೇಶದಲ್ಲಿನ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
6. ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
8. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9. ಮೆ॥ ಜಿಂದಾಲ್ ಅಲ್ಯೂಮಿನಿಯಮ್ ಲಿಮಿಟೆಡ್, ಜಿಂದಾಲ್ ನಗರ, ತುಮಕೂರು ರಸ್ತೆ, ಬೆಂಗಳೂರು-560 073.
10. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.